# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **130** |
| ಸದಸ್ಯರ ಹೆಸರು | : | ಶ್ರೀ ಚಿದಾನಂದ್.ಎಂ.ಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 08-12-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಎಷ್ಟು ವಿಸ್ತೀರ್ಣದ ಮನೆಗಳಿಗೆ ವಾಸಯೋಗ್ಯ ಪ್ರಮಾಣ ಪತ್ರದಿಂದ ವಿನಾಯತಿ ನೀಡಲಾಗಿದೆ ಮತ್ತು ಎಷ್ಟು ಅಂತಸ್ತಿನ ಕಟ್ಟಡಗಳಿಗೆ ವಿನಾಯತಿ ನೀಡಲಾಗಿದೆ; | ರಾಜ್ಯದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರವು ಸ್ವಾಧೀನಾನುಭವ ಪ್ರಮಾಣಪತ್ರ (Occupancy Certificate) ಪಡೆಯುವುದರಿಂದ ವಿನಾಯಿತಿ ನೀಡುವ ಸಂಬಂಧ ಹೊರಡಿಸುವ ಆದೇಶಗಳು ಕೆಳಕಂಡಂತಿವೆ:<br>1. ಸರ್ಕಾರದ ಆದೇಶ ಸಂಖ್ಯೆ: ನಅಇ 334 ಎಂಎನ್‌ಯು 2025, ಬೆಂಗಳೂರು ದಿನಾಂಕ 13.10.2025 (ನಗರಾಭಿವೃದ್ಧಿ ಇಲಾಖೆ, ಜಿ.ಬಿ.ಎ & ಬೆಂ.ನ.ಪಾ-1) ರಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ 1200 ಚದರ ಅಡಿಗಳ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ನೆಲ + 2 ಅಂತಸ್ತು ಅಥವಾ ಸ್ಟಿಲ್ಟ್ + 3 ಅಂತಸ್ತಿನವರೆಗಿನ ವಸತಿ ಕಟ್ಟಡಗಳಿಗೆ ಸ್ವಾಧೀನಾನುಭವ ಪತ್ರ (occupancy certificate) ಪಡೆಯುವುದರಿಂದ ವಿನಾಯಿತಿ ನೀಡಲಾಗಿರುತ್ತದೆ. |
| ಆ) | ಕೆಲವೆಡೆ ಈಗಾಗಲೇ ನಿರ್ಮಾಣವಾಗಿರುವ ಮನೆಗಳಲ್ಲಿ, ಮೂರನೇ ಅಂತಸ್ತಿನಲ್ಲಿ ಕೇವಲ ಒಂದೇ ಕೊಠಡಿ ನಿರ್ಮಾಣ ಮಾಡಿದ್ದರೂ ಸಹ ವಿದ್ಯುತ್ ಸಂಪರ್ಕ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | 2. ಸರ್ಕಾರದ ಆದೇಶ ಸಂಖ್ಯೆ: ನಅಇ 283 ಎಂ.ಎನ್.ಇ 2025(ಇ) ಬೆಂಗಳೂರು, ದಿನಾಂಕ 24.10.2025 ರಲ್ಲಿ (ನಗರಾಭಿವೃದ್ಧಿ ಇಲಾಖೆ, ಮಹಾನಗರಪಾಲಿಕೆ-2), ರಾಜ್ಯದಲ್ಲಿನ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಿರ್ಮಿಸಿರುವ ನೆಲ + 2 ಅಂತಸ್ತು ಅಥವಾ ಸ್ಟಿಲ್ಟ್ (Stilt) + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣಪತ್ರ (Occupancy Certificate) ಪಡೆಯುವುದರಿಂದ ವಿನಾಯಿತಿ ನೀಡಲಾಗಿರುತ್ತದೆ.<br>3. ಸರ್ಕಾರದ ಆದೇಶ ಸಂಖ್ಯೆ: ನಅಇ 244 ಜೆ.ಇ.ಎಲ್.2025 ಬೆಂಗಳೂರು , ದಿನಾಂಕ 24.10.2025 ರಲ್ಲಿ (ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ-2 & ಮಂಡಳಿ), ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ (ಮಹಾನಗರ ಪಾಲಿಕೆಗಳನ್ನು ಹೊರತುಪಡಿಸಿ) 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಿರ್ಮಿಸಲಾಗಿರುವ, ನೆಲ + 2 ಅಂತಸ್ತು ಅಥವಾ ಸ್ಟಿಲ್ಟ್ (Stilt) + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣಪತ್ರ (Occupancy Certificate) ಪಡೆಯುವುದರಿಂದ ವಿನಾಯಿತಿ ನೀಡಲಾಗಿರುತ್ತದೆ. |
| ಇ) | ಪ್ರಸ್ತುತ ಸರ್ಕಾರ ಜಿಬಿಎ ವ್ಯಾಪ್ತಿಯ ವಸತಿ ಉದ್ದೇಶದ ಕಟ್ಟಡಗಳಿಗೆ ಮಾತ್ರ ಒಸಿ ವಿನಾಯತಿ ನೀಡಿದ್ದು, ವಾಣಿಜ್ಯ ಮತ್ತು ಕೈಗಾರಿಕಾ ಕಟ್ಟಡಗಳಿಗೆ ನೀಡದೇ ಇರುವ ಕಾರಣದಿಂದ ಜನತೆ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಕ್ಷೆ ಮಂಜೂರಾತಿ ಪಡೆದು ನಿರ್ಮಿಸುವ ನೆಲ+2 ಅಂತಸ್ತು ಅಥವಾ ಸ್ಟಿಲ್ಟ್+3 ಅಂತಸ್ತಿನ ವಾಸದ ಕಟ್ಟಡಗಳಿಗೆ ಮಾತ್ರ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ ವಿನಾಯಿತಿ ನೀಡಲಾಗಿರುತ್ತದೆ. |

| | | |
|---|---|---|
| ಈ) | ಗ್ರಾಮೀಣ ಪ್ರದೇಶದಲ್ಲಿ ಒ.ಸಿ. ವಿನಾಯತಿ ನೀಡದ ಕಾರಣ ತೋಟ, ಹೊಲದಲ್ಲಿ ನಿರ್ಮಿಸಿರುವ ಕಟ್ಟಡಗಳಿಗೂ ಸಹ ವಿದ್ಯುತ್ ಸಂಪರ್ಕ ಸಿಗದೇ ಕೃಷಿ ಚಟುವಟಿಕೆಗಳಿಗೆ ಮತ್ತು ಇತರ ಕೃಷಿಯಾಧಾರಿತ ಕೈಗಾರಿಕಾ ಚಟುವಟಿಕೆಗಳಿಗೂ ತೊಂದರೆ ಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ಮಾನ್ಯ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಹೊರಡಿಸಿರುವ Conditions of Supply ನ ನಿಯಮಾವಳಿ 4 (General procedure for arranging Power supply) ಹಾಗೂ ಕಾಲಕಾಲಕ್ಕೆ ಹೊರಡಿಸಿರುವ ತಿದ್ದುಪಡಿ ಅನ್ವಯ ಅಗತ್ಯ ದಾಖಲೆಗಳನ್ನು ಪಡೆದು ಮತ್ತು ಮಾನ್ಯ ಸರ್ವೋಚ್ಛ ನ್ಯಾಯಾಲಯದ ದಿನಾಂಕ:17.12.2024 ರ Civil Appeal No.14604 & 14605 of 2024 ತೀರ್ಪಿನ ಅನುಸಾರ ಸೂಕ್ತ ಕ್ರಮವಹಿಸುವಂತೆ ಮಾನ್ಯ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ದಿನಾಂಕ 13.03.2025 ರಂದು ನೀಡಿರುವ ನಿರ್ದೇಶನದನುಸಾರ ಹಾಗೂ ಈ ಕೆಳಕಂಡ ಸರ್ಕಾರದ ಆದೇಶಗಳಲ್ಲಿ ನೀಡಿರುವ ವಿನಾಯಿತಿಗಳನ್ನು ಅಳವಡಿಸಿಕೊಂಡು Occupancy Certificate (OC) / Completion Certificate (CC) ಸಲ್ಲಿಸಲಾಗುವ ಎಲ್ಲಾ ಸ್ಥಾವರಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತದೆ:<br>1. ಸರ್ಕಾರದ ಆದೇಶ ಸಂಖ್ಯೆ: ನ ಅಇ 283 ಎಂ.ಎನ್.ಇ 2025(ಇ) ಬೆಂಗಳೂರು, ದಿನಾಂಕ:24.10.2025.<br>2. ಸರ್ಕಾರದ ಆದೇಶ ಸಂಖ್ಯೆ: ನ ಅಇ 244 ಜೆ.ಇ.ಎಲ್.2025 ಬೆಂಗಳೂರು , ದಿನಾಂಕ:24.10.2025. |
| ಉ) | ಶೀಟ್ ಮತ್ತು ಹಂಚಿನಲ್ಲಿ ನಿರ್ಮಾಣವಾದ ತಾತ್ಕಾಲಿಕ ಕಟ್ಟಡಗಳಿಗೆ/ ಕೃಷಿಯಾಧಾರಿತ ಉತ್ಪಾದನಾ ಚಟುವಟಿಕೆಗಳಿಗೆ ಒ.ಸಿ. ವಿನಾಯತಿ ನೀಡಲು ಸರ್ಕಾರ ಉದ್ದೇಶಿಸಿದೆಯೇ; ಇಲ್ಲದೇ ಇದ್ದಲ್ಲಿ ಕಟ್ಟಡಗಳು ವಿದ್ಯುತ್ ಸಂಪರ್ಕ ಪಡೆಯಲು ಅನುಸರಿಸಬೇಕಾದ ಕ್ರಮಗಳೇನು? | ಮಾನ್ಯ ಕೆ.ಇ.ಆರ್.ಸಿ. Conditions of Supply of Electricity of Distribution Licensee in the state of Karnataka ರ ವಿದ್ಯುತ್ ಪೂರೈಕೆ ನಿಯಮಾವಳಿಗಳನ್ನು ಆಧರಿಸಿ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆಯಬಹುದಾಗಿದೆ. |

ಸಂಖ್ಯೆ: ಎನರ್ಜಿ 285 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು